ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಸ್ಟ್ಯಾಂಪು (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : – ವಿಧೇಯಕವನ್ನು ಮಂಡಿಸಲಾಗಿದೆ.

ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ 2012 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:–ಪ್ರಸ್ತಾವವನ್ನು ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಖಂಡ 2 ರಿಂದ 3

ಅಧ್ಯಕ್ಷರು : – ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2 ರಿಂದ 3ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.
2 ರಿಂದ 3ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು : – ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : – ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ 2012 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು) : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿದೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : – ಪ್ರಸ್ತಾವನೆ ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಖಂಡ 2 ರಿಂದ 5

ಅಧ್ಯಕ್ಷರು : – ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.